ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 23 ನೇ ಸೆಪ್ಟೆಂಬರ್, 2020

ಶಿವಮೊಗ್ಗ ಮತ್ತು ದಾವಣಗೆರೆ ಜಿಲ್ಲೆಯ ಎಲ್ಲಾ ಗ್ರಾಮಗಳಿಗೆ ಸಾರ್ವಜನಿಕ ಸ್ಮಶಾನ ಜಾಗ ಒದಗಿಸುವ ಬಗ್ಗೆ

ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

345 (334) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಶಿವಮೊಗ್ಗ ಮತ್ತು ದಾವಣಗೆರೆ ಜಿಲ್ಲೆಯ ಹೊನ್ನಾಳಿ ಮತ್ತು ಚನ್ನಗಿರಿ ತಾಲ್ಲೂಕುಗಳ ಎಲ್ಲಾ ಗ್ರಾಮಗಳಲ್ಲಿ ಸಾರ್ವಜನಿಕ ಸ್ಮಶಾನ ಮಂಜೂರು ಆಗಿದೆಯೇ ; ಇಲ್ಲದಿದ್ದಲ್ಲಿ, ಸ್ಮಶಾನಕ್ಕೆ ಜಾಗವನ್ನು ಕಾಯ್ದಿರಿಸಿರುವ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮವೇನು ;

(ಆ) ಕೆಲವು ಗ್ರಾಮ ಪಂಚಾಯಿತಿಗಳಲ್ಲಿ ಸಾರ್ವಜನಿಕ ಸ್ಮಶಾನ ಮಂಜೂರಾಗಿದ್ದು, ಸ್ಮಶಾನ ಜಾಗ ಗುರುತಿಸಲು ಸರ್ಕಾರಕ್ಕಿರುವ ಅಡೆತಡೆಗಳೇನು ;

(ಇ) ಸ್ಮಶಾನಗಳಿಗೆ ರಸ್ತೆ, ನೀರು, ದೀಪದ ವ್ಯವಸ್ಥೆ ಮತ್ತು ಕಾಂಪೌಂಡ್ ವ್ಯವಸ್ಥೆಗಳನ್ನು ಕಲ್ಪಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ;

(ಈ) ಶಿವಮೊಗ್ಗ ನಗರದಲ್ಲಿರುವ ಸ್ಮಶಾನಗಳ ಸಂಖ್ಯೆ ಎಷ್ಟು ; ಇವುಗಳ ಅಭಿವೃದ್ಧಿಗೆ ಸರ್ಕಾರ ಕೈಗೊಂಡ ಕ್ರಮಗಳೇನು ; ಸ್ಮಶಾನಗಳು ಭರ್ತಿಯಾಗಿರುವುದರಿಂದ ಸರ್ಕಾರ ಬೇರೆ ಜಾಗ ಗುರುತಿಸಿದೆಯೇ?